# ಜಿಲ್ಲಾ ಪಂಚಾಯತ್, ಹಾಸನ.

ದಿನಾಂಕ: 24-05-2011

ಸಂಖ್ಯೆ: ಜಿಪಂಹಾ/ಪ.ಶಾ/9/2011-12

## ಸಭಾಹ್ವಾನ ಪತ್ರ

ಶ್ರೀ ಬಿ.ಡಿ.ಚಂದ್ರೇಗೌಡ , ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ **ಸಮಿತಿ,** ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 08-06-2011ರಂದು ಬುಧವಾರ ಬೆಳಿಗ್ಗೆ: 11-00ಗಂಟೆಗೆ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯನ್ನು ಹಾಸನ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಸದರಿ ಸಭೆಗೆ ಮಾನ್ಯ ಸದಸ್ಯರುಗಳು ಹಾಜರಾಗಿ ಸಲಹೆ ಸಹಕಾರ ನೀಡಲು ಕೋರಲಾಗಿದೆ.

ಯೋಜನಾ ನಿರ್ದೇಶಕರು
ಡಿ.ಆರ್.ಡಿ.ಎ ಕೋಶ
ಹಾಗೂ ಸದಸ್ಯ ಕಾರ್ಯದರ್ಶಿ
ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ.

ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ಸೆಪ್ಟೆಂಬರ್2010 ರಿಂದ ಮಾರ್ಚ್ 2011ರ ವರೆಗಿನ ಮಾಹೆಗಳ ಮಾಸಿಕ ಲೆಕ್ಕಪತ್ರಗಳಿಗೆ ಅನುಮೋದನೆ ನೀಡುವ ಬಗ್ಗೆ
2. 2011-12ನೇ ಸಾಲಿನ ಮೊದಲನೇ ತ್ರೈಮಾಸಿಕ ಅನುದಾನ ಹಾಗೂ ಇತರೆ ಅನುದಾನ ಜಮೆ ವಿವರ
3. ವಿಶ್ವ ಕನ್ನಡ ಸಮ್ಮೇಳನ-2011ಕ್ಕೆ ಹಾಸನ ಜಿಲ್ಲಾ ಪಂಚಾಯಿತಿ ವತಿಯಿಂದ ಸ್ಥಬ್ಧಚಿತ್ರ ನಿರ್ಮಿಸಲಾದ ಕುರಿತು.

**ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು**

ಪ್ರತಿಯನ್ನು:

1. ಶ್ರೀ ಬಿ.ಡಿ.ಚಂದ್ರೇಗೌಡ, ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
2. ಶ್ರೀ ಲಕ್ಷ್ಮಣಗೌಡ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
3. ಶ್ರೀಮತಿ ಭಾಗ್ಯ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ

4. ಶ್ರೀ ಪುರುಷೋತ್ತಮ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
5. ಶ್ರೀಮತಿ ಸಿ.ಎನ್.ರತ್ನಮ್ಮ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
6. ಶ್ರೀಮತಿ ಡಿ.ಜಿ.ಅಂಬಿಕಾ ರಾಮಣ್ಣ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
7. ಶ್ರೀ ಎನ್.ಡಿ.ಕಿಶೋರ್, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
8. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ
9. ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ,ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ
10. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ
11. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನರವರ ಆಪ್ತಶಾಖೆಗೆ
12. ಉಪ ಕಾರ್ಯದರ್ಶಿ(ಆಡಳಿತ), ಜಿಲಾ ಪಂಚಾಯಿತಿ, ಹಾಸನ.
13. ಉಪ ಕಾರ್ಯದರ್ಶಿ(ಅಭಿವೃದ್ದಿ), ಜಿಲ್ಲಾ ಪಂಚಾಯಿತಿ, ಹಾಸನ.
14. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
15. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
16. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
17. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
18. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕಳುಹಿಸುತ್ತಾ, ಪೂರ್ಣ ಮಾಹಿತಿಯೊಂದಿಗೆ ಇಲಾಖಾ ಮುಖ್ಯಸ್ಥರು ಸಭೆಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಿದೆ.
19. ಕಛೇರಿ ಪ್ರತಿ.

# ದಿನಾಂಕ: 08-6-2011ರಂದು ಪೂರ್ವಾಹ್ನ: 11-00ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

**ಅಧ್ಯಕ್ಷತೆ: ಶ್ರೀ ಬಿ.ಡಿ.ಚಂದ್ರೇಗೌಡ**

**ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ**

**ಹಾಜರಿ:07** **ಗೈರು ಹಾಜರಿ: 00**

<table>
<tr><th>ಕ್ರ ಸಂ</th><th>ವಿಷಯ</th><th>ಚರ್ಚೆ</th><th>ತೀರ್ಮಾನ</th></tr>
<tr><td></td><td></td><td>ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ. ಇವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು, ಮುಖ್ಯ ಲೆಕ್ಕಾಧಿಕಾರಿ, ಮುಖ್ಯ ಯೋಜನಾಧಿಕಾರಿ, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು.</td><td></td></tr>
<tr><td>1</td><td>ಸೆಪ್ಟೆಂಬರ್ 2010 ರಿಂದ ಮಾರ್ಚ್ -2011ರ ವರೆಗಿನ ಮಾಹೆಯ ಮಾಸಿಕ ಲೆಕ್ಕ ಅನುಮೋದನೆಗೆ</td><td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ ಸಂಕಲನ/ ಮಾಸಿಕ ಲೆಕ್ಕ-1/2010-11/2011-12 ದಿನಾಂಕ: 30-05-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಪ್ರಸ್ತಾಪಿಸುತ್ತಾ, ಜಿಲ್ಲಾ ಪಂಚಾಯಿತಿ ಹಾಸನದ ಸೆಪ್ಟೆಂಬರ್ 2010ರಿಂದ ಮಾರ್ಚ್ 2011ರವರೆಗಿನ ಮಾಹೆಯ ಜಮಾ ಮತ್ತು ಖರ್ಚಿನ ತ:ಖ್ತೆಗಳು ಚಲನ್ ಮತ್ತು ಓಚರ್ ಗಳು ಸ್ವೀಕೃತವಾಗಿರುತ್ತದೆ. ಖಜಾನೆಯಿಂದ ಸ್ವೀಕೃತವಾದ ಒಟ್ಟು ಜಮೆ ಮತ್ತು ಖರ್ಚಿನ ವಿವರಗಳನ್ನು ಪ್ರಧಾನ ಲೆಕ್ಕ ಶೀರ್ಷಿಕೆವಾರು ಸಂಕಲನ ಗಣಕೀಕರಣದಲ್ಲಿ ತಯಾರಿಸಲಾಗಿದೆ. ಸದರಿ ಸಂಕಲನದ ತ:ಖ್ತೆಯ ವಿವರ ರಾಜಸ್ವ ಜಮೆ ವೆಚ್ಚ ಮತ್ತು ಜಮಾ ಶೀರ್ಷಿಕೆಗಳ ಲೆಕ್ಕ, ಜಿಲ್ಲಾ ಪಂಚಾಯಿತಿಯ ಒಟ್ಟು ಜಮಾ ಮತ್ತು ಖರ್ಚಿನ ವಿವರ ಕೆಳಗಿನಂತಿದೆ. ಸೆಪ್ಟೆಂಬರ್ 2010ರಿಂದ ಮಾರ್ಚ್ 2011ರವರೆಗಿನ ಮಾಸಿಕ ಲೆಕ್ಕ ವಿವರ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಅನುಮೋದನೆ ನೀಡಲು ಮಂಡಿಸಿದೆ.<br><table><tr><th>ತಿಂಗಳು</th><th>ಜಮೆ</th><th>ಖರ್ಚು</th></tr><tr><td>ಸೆಪ್ಟೆಂಬರ್-2010</td><td>1,08,85,307</td><td>11,0073,198</td></tr><tr><td>ಅಕ್ಟೋಬರ್-2010</td><td>42,0048,764</td><td>16,58,70,529</td></tr></table></td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಕೋರಿರುವಂತೆ ಜಿಲ್ಲಾ ಪಂಚಾಯಿತಿ ಹಾಸನದ ಸಪ್ಟೆಂಬರ್ 2010ರ ಮಾಹೆಯಿಂದ ಮಾರ್ಚ್ 2011ರ ಮಾಹೆಯವರೆಗಿನ ಜಮಾ ಮತ್ತು ಖರ್ಚಿನ ತ್ಖ್ತೆ ರಾಜಸ್ವ ಜಮೆ ವೆಚ್ಚಗಳಿಗೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು.<br><table><tr><th>ತಿಂಗಳು</th><th>ಜಮೆ</th><th>ಖರ್ಚು</th></tr><tr><td>ಸೆಪ್ಟೆಂಬರ್-</td><td>1,08,85,307</td><td>11,0073,198</td></tr></table></td></tr>
</table>

| | | |
|---|---|---|
| ನವೆಂಬರ್-2010 | - 3,18,78,305 | 15,19,10,187 |
| ಡಿಸೆಂಬರ್-2010 | 31,48,09,541 | 14,34,78,847 |
| ಜನವರಿ-2011 | 4,48,64,197 | 16,29,12,557 |
| ಫೆಬ್ರವರಿ 2011 | 3,43,67,422 | 14,97,20,435 |
| ಮಾರ್ಚ್-2011 | 7,00,90,499 | 24,89,08,962 |

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಗೆ ಎಲ್ಲಾ ಇಲಾಖೆಯ ಮುಖ್ಯಸ್ಥರುಗಳು ಕಡ್ಡಾಯವಾಗಿ ಹಾಜರಾಗುವಂತೆ ನಿರ್ದೇಶನವನ್ನು ನೀಡಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ತಿಳಿಸಿದರು.

**ಸಮಾಜ ಕಲ್ಯಾಣ ಇಲಾಖೆ:** 2010-11ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳಿಗೆ ನಿಗದಿಪಡಿಸಿದ್ದ ಅನುದಾನವನ್ನು ವಿನಿಯೋಗಿಸಿ ಶೇ.98ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ ಎಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ವಿವರ ನೀಡಿದರು.

**ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ:** 2010-11ನೇ ಸಾಲಿಗೆ ಹಿಮದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳಿಗೆ ನಿಗದಿಪಡಿಸಿದ್ದ ಅನುದಾನವನ್ನು ವಿನಿಯೋಗಿಸಿ ಶೇ.98.56ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ ಎಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆರವರು ವಿವರ ನೀಡಿದರು.

**ತೋಟಗಾರಿಕೆ ಇಲಾಖೆ:**

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ತೋಟಗಾರಿಕೆ ಇಲಾಖೆಯಲ್ಲಿ ಹನಿ ನೀರಾವರಿ ಯೋಜನೆಯಡಿ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ್ದು, 8-10 ತಿಂಗಳಿನಿಂದ ಇಲಾಖೆಯಲ್ಲಿಯೇ ಬಾಕಿ ಇದ್ದು, ಫಲಾನುಭವಿಗಳಿಗೆ ಸಹಾಯಧನವನ್ನು ನೀಡಿರುವುದಿಲ್ಲ ಮತ್ತು ಎರೆಹುಳು ಗೊಬ್ಬರವನ್ನು ತಾಲ್ಲೂಕುಗಳಿಗೆ ಎಷ್ಟು ಪ್ರಮಾಣದಲ್ಲಿ ಸರಬರಾಜು ಮಾಡಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಆಲೂಗೆಡ್ಡೆ ಬಿತ್ತನೆ ಬೀಜ ವಿತರಣೆ ಮಾಡಿರುವ ಬಗ್ಗೆ ವಿವರಗಳನ್ನು ನೀಡುವಂತೆ ಉಪ ನಿರ್ದೇಶಕರಿಗೆ ತಿಳಿಸಿದರು.

| | | |
|---|---|---|
| 2010 | | |
| ಅಕ್ಟೋಬರ್-2010 | 42,0048,764 | 16,58,70,529 |
| ನವೆಂಬರ್-2010 | 3,18,78,305 | 15,19,10,187 |
| ಡಿಸೆಂಬರ್-2010 | 31,48,09,541 | 14,34,78,847 |
| ಜನವರಿ-2011 | 4,48,64,197 | 16,29,12,557 |
| ಫೆಬ್ರವರಿ-2011 | 3,43,67,422 | 14,97,20,435 |
| ಮಾರ್ಚ್-2011 | 7,00,90,499 | 24,89,08,962 |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಆಲೂಗಡ್ಡೆ ಬೆಳೆಗೆ ಬರುವ ಕೊನೆಯ ಅಂಗಮಾರಿ ರೋಗ ನಿಯಂತ್ರಣಕ್ಕೆ ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕೊನೆಯ ಅಂಗಮಾರಿ ರೋಗ ನಿಯಂತ್ರಣಕ್ಕೆ ಪರಿಣಾಮಕಾರಿ ಔಷಧಿಗಳ ಬಗ್ಗೆ ಹೆಚ್ಚಿನ ಪ್ರಚಾರ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಉಪ ನಿರ್ದೇಶಕರು ಉತ್ತರಿಸುತ್ತಾ, ಆಲೂಗಡ್ಡೆ ಬೆಳೆಗೆ ಔಷಧಿ ಖರೀದಿಸಲು ಪ್ರತಿ ರೈತರಿಗೆ ರೂ.1000/-ಗಳ ಸಹಾಯಧನವನ್ನು ನೀಡಲಾಗುತ್ತಿದೆ. ಹಾಸನ ಜಿಲ್ಲೆಗೆ ರೂ.1.35ಕೋಟಿಗಳ ಅನುದಾನವನ್ನು ಔಷಧಿಗಳಿಗೆ ನಿಗದಿಪಡಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ತೋಟಗಾರಿಕೆ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ ಸಮರ್ಪಕ ಮಾಹಿತಿಯನ್ನು ಉಪ ನಿರ್ದೇಶಕರು ನೀಡಿರುವುದಿಲ್ಲ. ಆದ್ದರಿಂದ, ಇಲಾಖೆಯ ಕಾರ್ಯಕ್ರಮಗಳ ಬಗ್ಗೆ ಪೂರ್ಣ ಮಾಹಿತಿಯನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಉಪ ನಿರ್ದೇಶಕರಿಗೆ ಸೂಚಿಸಿದರು.<br>**ಶಿಕ್ಷಣ ಇಲಾಖೆ:**<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಶಿಕ್ಷಣ ಇಲಾಖೆಯಲ್ಲಿ ಆಹಾರ ಸರಬರಾಜಿಗೆ ಸಂಬಂಧಿಸಿದಂತೆ, ಆಹಾರ ಸಾಮಗ್ರಿಗಳನ್ನು ಶಾಲಾ ವೇಳೆಯಲ್ಲಿ ಸರಬರಾಜು ಮಾಡದೆ ಶಾಲಾ ಸಮಯ ಮುಗಿದ ನಂತರ ಶಾಲೆಯ ಪಕ್ಕದಲ್ಲಿರುವ ಮನೆಗೆ ಹಾಕಿ ಹೋಗಿರುತ್ತಾರೆ ಮತ್ತು ಅಕ್ಕಿಯ ಅಳತೆಯಲ್ಲಿ ಕಡಿಮೆಯಿರುವುದಾಗಿಯೂ ಸಹ ಅನೇಕ ಶಾಲೆಗಳಿಂದ ದೂರುಗಳು ಬಂದಿರುತ್ತವೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಸಮರ್ಪಕ ಅಳತೆಯಲ್ಲಿ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಶಾಲಾ ವೇಳೆಯಲ್ಲಿ ಶಿಕ್ಷಕರ ಸಮ್ಮುಖದಲ್ಲಿ ನೀಡುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ಸೂಚಿಸಿದರು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶವನ್ನು ಪಡೆದಿರುವ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ ಮತ್ತು ಡಿಸ್ಟಿಂಕ್ಷನ್ ನಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲು ಉದ್ದೇಶಿಸಲಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಹಣದ ಅವಶ್ಯಕತೆಯಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯವನ್ನು ಮಾಡಬೇಕೆಂದು ಕೋರಿದರು. | ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುವಂತೆ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶವನ್ನು ಪಡೆದಿರುವ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ , ರಾಜ್ಯಕ್ಕೆ ಮತ್ತು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿರುವ ಹಾಗೂ ಡಿಸ್ಟಿಂಕ್ಷನ್ ನಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡುವ ಉದ್ದೇಶಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.25000/-ಗಳನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

**ಕ್ರೀಡಾ ಇಲಾಖೆ:**

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಬೇಲೂರು ತಾಲ್ಲೂಕು ಕ್ರೀಡಾಂಗಣ ಕಾಮಗಾರಿ ಸ್ಥಗಿತಗೊಂಡಿದೆ. ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಕಾರ್ಯಪಾಲಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಸನ ಇವರು ಮಾತನಾಡುತ್ತಾ, ಗುತ್ತಿಗೆದಾರರು ಕೆಲಸ ಮಾಡುತ್ತಿಲ್ಲವೆಂದು ವಿವರ ನೀಡಿದರು.

**ಆಯುಷ್ ಇಲಾಖೆ:**

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಆಯುಷ್ ಆಸ್ಪತ್ರೆಗೆ ನಾಮಫಲಕವನ್ನು ಹಾಕಲು ಕ್ರಮ ವಹಿಸುವಂತೆ ಜಿಲ್ಲಾ ವೈದ್ಯಾಧಿಕಾರಿಗಳು, ಆಯುಷ್ ಇಲಾಖೆರವರಿಗೆ ಸೂಚಿಸಲಾಯಿತು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಆಯುಷ್ ವೈದ್ಯರು ರೋಗಿಗಳಿಗೆ ಅಲೋಪಥಿಕ್ ಔಷಧಿಗಳನ್ನು ಬರೆದುಕೊಡುತ್ತಿದ್ದಾರೆ. ಈ ಬಗ್ಗೆ ಪರಿಶೀಲಿಸಬೇಕೆಂದು ಕೋರಿದರು.

**ಕೃಷಿ ಇಲಾಖೆ:**

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಗ್ರಾಮಗಳಲ್ಲಿ ನಡೆಸುವ ಗ್ರಾಮ ಸಭೆಗಳಿಗೆ ಬೇಲೂರು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಹಾಜರಾಗುತ್ತಿಲ್ಲ. ಜನಸ್ಪಂದನ ಕಾರ್ಯಕ್ರಮಕ್ಕೂ ಸಹ ಹಾಜರಾಗುತ್ತಿಲ್ಲ. ಅವರಿಗೆ ಕಾರಣ ಕೇಳಿ ನೋಟೀಸು ಜಾರಿ ಮಾಡುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು ಹಾಗೂ ರೈತ ಸಂಪರ್ಕ ಕೇಂದ್ರಗಳನ್ನು ಬೆಳಿಗ್ಗೆ 9-00ಗಂಟೆಗೆ ತೆರೆಯಲು ಸೂಚನೆಯನ್ನು ನೀಡಲು ಕ್ರಮ ವಹಿಸುವಂತೆ ತಿಳಿಸಿದರು.

ರಸಗೊಬ್ಬರಕ್ಕೆ ಸಂಬಂಧಿಸಿಂತೆ, ಡಿ.ಎ.ಪಿ ರಸಗೊಬ್ಬರದ ಕೊರತೆಯಿದೆ. ಪ್ರತಿ ರಸಗೊಬ್ಬರದ ದರ ಪಟ್ಟಿಯನ್ನು ಪ್ರತಿ ಅಂಗಡಿಯಲ್ಲಿ ಹಾಕಲು ಸೂಚನೆ ನೀಡಬೇಕೆಂದು ತಿಳಿಸಿದರು. ಸಹಕಾರ ಸಂಘಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕೆಂದೂ ಸಹ ತಿಳಿಸಿದರು.

ಜಂಟಿ ನಿರ್ದೇಶಕರು ಉತ್ತರಿಸುತ್ತಾ, ರಸಗೊಬ್ಬರದ ದರಕ್ಕೆ ಸಂಬಂಧಿಸಿದಂತೆ, ಮಾನ್ಯ ಜಿಲ್ಲಾಧಿಕಾರಿಯವರು ಸಭೆಯನ್ನು ನಡೆಸಿ ತೀರ್ಮಾನಿಸುವುದಾಗಿ ತಿಳಿಸಿರುತ್ತಾರೆಂದು ಸಭೆಯ ಗಮನಕ್ಕೆ ತಂದರು.

**ಸಹಕಾರ ಇಲಾಖೆ:**

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಸಹಕಾರ ಪತ್ತಿನ ಬ್ಯಾಂಕುಗಳ ಮೂಲಕ ಹೊಸ ಸದಸ್ಯರಿಗೂ ಸಹ ಶೇ.1ರ ಬಡ್ಡಿದರದಲ್ಲಿ ಸಾಲವನ್ನು ನೀಡಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಉಪ ನಿಬಂಧಕರಿಗೆ ಸೂಚಿಸಿದರು.

| | | | |
|---|---|---|---|
| | | ಸಹಕಾರ ಸಂಘಗಳ ಮೂಲಕ ಗೊಬ್ಬರವನ್ನು ವಿತರಣೆ ಮಾಡುವಾಗ ಸಮರ್ಪಕವಾಗಿ ವಿತರಣೆ ಮಾಡಲು ನಿರ್ದೇಶನ ನೀಡುವಂತೆ ತಿಳಿಸಿದರು.<br>**ಮೀನುಗಾರಿಕೆ ಇಲಾಖೆ:**<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಮೀನುಗಾರರ ಮಹಾಮಂಡಳ, ಮೈಸೂರು ಇವರ ವತಿಯಿಂದ ಹಿಡಿಯುವ ಮೀನುಗಳನ್ನು ಮೈಸೂರು ಅಥವಾ ಬೆಂಗಳೂರಿಗೆ ಸಾಗಾಣಿಕೆ ಮಾಡಬೇಕಾಗಿರುತ್ತದೆ. ಆದರೆ, ಅವರು ಹಾಸನದಲ್ಲಿಯೇ ಹೊರಗಡೆ ಮಾರಾಟ ಮಾಡುತ್ತಿರುವುದು ಕಂಡುಬಂದಿರುತ್ತದೆ. ಇದರಿಂದ, ಸ್ಥಳೀಯ ಮೀನುಗಾರರಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುವಂತೆ ಹಾಗೂ ಎನ್.ಎಫ್.ಸಿ ವತಿಯಿಂದ ಏನೇನು ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ತಿಳಿಸಿದರು.<br>**ಜಲಾನಯನ ಅಭಿವೃದ್ಧಿ ಇಲಾಖೆ:**<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಲಾನಯನ ಇಲಾಖೆಯ ವತಿಯಿಂದ ಕೃಷಿಹೊಂಡಗಳನ್ನು ಕಡಿಮೆ ಮಾಡಿ ಚೆಕ್ ಡ್ಯಾಂ ಮತ್ತು ಗೋಕಟ್ಟೆಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕೈಗೆತ್ತಿಕೊಳ್ಳಬೇಕೆಂದು ಸೂಚಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಜಲಾನಯನ ಇಲಾಖೆಯ ವತಿಯಿಂದ ಅನುಷ್ಠಾನ ಮಾಡಿರುವ ಕಾಮಗಾರಿಗಳನ್ನು ಪರಿಶೀಲನೆ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಾನ್ಯ ಸದಸ್ಯರು ಕೋರಿರುವಂತೆ ಇಲಾಖಾ ಕಾರ್ಯಕ್ರಮಗಳ ಪರಿಶೀಲನೆಗೆ ಸಂಬಂಧಿಸಿದಂತೆ, ದಿನಾಂಕವನ್ನು ನಿಗದಿಪಡಿಸಿ ಮಾನ್ಯ ಅಧ್ಯಕ್ಷರು ಮತ್ತು ಸದಸ್ಯರನ್ನು ಕರೆದುಕೊಂಡು ಹೋಗಲು ಕ್ರಮ ವಹಿಸುವಂತೆ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಯವರಿಗೆ ತಿಳಿಸಿದರು.<br>**ಗ್ರಾಮೀಣ ಕುಡಿಯುವ ನೀರು ಯೋಜನೆ:**<br>ಕಾರ್ಯಪಾಲಕ ಅಭಿಯಂತರರು, ಕುಡಿಯುವ ನೀರು ವಿಭಾಗ, ಹಾಸನ ಇವರು ಮಾತನಾಡುತ್ತಾ, 2011-12ನೇ ಸಾಲಿಗೆ ರೂ.31.60ಕೋಟಿಗಳಿಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸಲ್ಲಿಸಲಾಗಿದೆ. 2010-11ನೇ ಸಾಲಿನಲ್ಲಿ ರೂ.13.00ಕೋಟಿಗಳ ಬಾಕಿ ಕಾಮಗಾರಿಗಳು ಇರುವುದಾಗಿ ಸಭೆಗೆ ವಿವರ ನೀಡಿದರು. | |

| | | |
|---|---|---|
| | ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಯಡಿ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>**ಸಾಮಾಜಿಕ ಅರಣ್ಯ ವಿಭಾಗ:** ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸುಮಾರು 5200000 ವಿವಿಧ ಜಾತಿಯ ಸಸಿಗಳನ್ನು ಬೆಳೆಸಲಾಗಿದ್ದು, ಗ್ರಾಮ ಪಂಚಾಯಿತಿಗಳಿಂದ ಫಲಾನುಭವಿಗಳ ಪಟ್ಟಿಯನ್ನು ನೀಡಿದ ಕೂಡಲೇ ಸಸಿಗಳನ್ನು ವಿತರಣೆ ಮಾಡಲು ಕ್ರಮ ವಹಿಸುವುದಾಗಿ ಸಭೆಗೆ ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ರೈತರಿಗೆ ಈಗ ನೀಡುತ್ತಿರುವ ಸಸಿಗಳು ಬಹಳ ಚಿಕ್ಕದಾಗಿದ್ದು, ಸ್ವಲ್ಪ ದೊಡ್ಡ ಸಸಿಗಳನ್ನು ನೀಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. ಮತ್ತು ಕೂಳಿ ಮರದ ಸಸಿಗಳನ್ನು ಬೆಳೆಸಿ ರೈತರಿಗೆ ನೀಡಲು ಕ್ರಮ ವಹಿಸಬೇಕೆಂದು ಕೋರಿದರು. | |
| ಜಿಲ್ಲಾ ಪಂಚಾಯತ್ ಹಾಸನಕ್ಕೆ 2010-11ನೇ ಸಾಲಿನ 4ನೇ ಕಂತಿನ ತ್ರೈಮಾಸಿಕ ಅನುದಾನ ಜಮೆ ವಿವರಗಳು ಹಾಗೂ 2011-12ನೇ ಸಾಲಿನ ಮೊದಲನೇ ತ್ರೈಮಾಸಿಕ ಅನುದಾನ, ಸ್ವೀಕೃತಿ ವಿವರ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆವ್ಯ: ಅಧೀ:1/4/ ಹಕಾಸ: ಟಿಪ್ಪಣಿ: /2011-12 ದಿನಾಂಕ: 28-05-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು, ಹಾಸನ ಜಿಲ್ಲಾ ಪಂಚಾಯಿತಿಗೆ 2010-11ನೇ ಸಾಲಿನ 4ನೇ ಕಂತಿನ ತ್ರೈಮಾಸಿಕ ಅನುದಾನ ಜಮೆ ವಿವರಗಳು ಹಾಗೂ 2011-12ನೇ ಸಾಲಿನ ಮೊದಲನೇ ತ್ರೈಮಾಸಿಕ ಅನುದಾನಗಳು ಬಿಡುಗಡೆಯಾಗಿರುವ ಬಗ್ಗೆ ಸಭೆಯ ಅವಗಾಹನೆಗೆ ಸಲ್ಲಿಸಿದರು. | ಸಭೆಯು ಜಿಲ್ಲಾ ಪಂಚಾಯತ್ ಹಾಸನಕ್ಕೆ 2010-11ನೇ ಸಾಲಿನ 4ನೇ ಕಂತಿನ ತ್ರೈಮಾಸಿಕ ಅನುದಾನ ಜಮೆ ವಿವರಗಳು ಹಾಗೂ 2011-12ನೇ ಸಾಲಿನ ಮೊದಲನೇ ತ್ರೈಮಾಸಿಕ ಅನುದಾನಗಳು ಬಿಡುಗಡೆಯಾಗಿರುವ ಬಗ್ಗೆ ಸಭೆಯ ಅವಗಾಹಿಸಿತು. |
| ವಿಶ್ವ ಕನ್ನಡ ಸಮ್ಮೇಳನ - 2011ಕ್ಕೆ ಹಾಸನ ಜಿಲ್ಲಾ ಪಂಚಾಯಿತಿ ವತಿಯಿಂದ ಸ್ತಬ್ಧಚಿತ್ರ ನಿರ್ಮಿಸಲಾದ ಕುರಿತು. | ಸಂಖ್ಯೆ: ಜಿಪಂಹಾ/ಆಡಳಿತ(1)111-ವಾಹನ/2010-11 ದಿನಾಂಕ: 04-05-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ದಿನಾಂಕ: 11-03-2011ರಿಂದ 13-03-2011ರವರೆಗೆ ಬೆಳಗಾವಿಯಲ್ಲಿ ನಡೆದ ವಿಶ್ವ ಕನ್ನಡ ಸಮ್ಮೇಳನಕ್ಕೆ ಹಾಸನ ಜಿಲ್ಲೆಯ ಐತಿಹಾಸಿಕ ಮತ್ತು ಸಾಂಸ್ಕೃತಿಕ ವಿಶೇಷತೆಗಳನ್ನು ಬಿಂಬಿಸುವಂತಹ ಸ್ತಬ್ಧಚಿತ್ರವನ್ನು ನಿರ್ಮಿಸಿ ಕಳುಹಿಸುವಂತೆ ಹಾಗೂ ಇದಕ್ಕೆ ತಗಲುವ ವೆಚ್ಚವನ್ನು ಜಿಲ್ಲಾ ಪಂಚಾಯಿತಿಯಿಂದ ಭರಿಸುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಸ್ತಬ್ದ ಚಿತ್ರ ನಿರ್ಮಾಣ ಜವಾಬ್ದಾರಿಯನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಸನ ಇವರಿಗೆ ವಹಿಸಲಾಗಿತ್ತು. ಅದರಂತೆ, ದಿನಾಂಕ: 11-03-2011 ರಿಂದ 13-03-2011ರವರೆಗೆ ಬೆಳಗಾವಿಯಲ್ಲಿ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ದಿನಾಂಕ: 11-03-2011ರಿಂದ 13-03-2011 ರವರೆಗೆ ಬೆಳಗಾವಿಯಲ್ಲಿ ನಡೆದ ವಿಶ್ವ ಕನ್ನಡ ಸಮ್ಮೇಳನಕ್ಕೆ ಹಾಸನ ಜಿಲ್ಲೆಯ ಐತಿಹಾಸಿಕ ಮತ್ತು ಸಾಂಸ್ಕೃತಿಕ |

| | | | |
|---|---|---|---|
| | | ನಡೆದ ವಿಶ್ವಕನ್ನಡ ಸಮ್ಮೇಳನದಲ್ಲಿ ದರ್ಪಣ ಸುಂದರಿ, ಗೊಮಟೇಶ್ವರ, ಹಳೇಬೀಡು ದೇವಾಲಯ, ಹೊಯ್ಸಳ ಲಾಂಛನ, ಹಲ್ಮಿಡಿ ಶಾಸನ ಹಾಗೂ ವಿಶ್ವ ಪ್ರಸಿದ್ಧ ಐತಿಹಾಸಿಕ ತುಣುಕುಗಳನ್ನೊಳಗೊಂಡಂತೆ ಸ್ಥಬ್ದಚಿತ್ರ ತಯಾರಿಸಿ ಯಶಸ್ವಿಯಾಗಿ ಪ್ರದರ್ಶಿಸಲಾಗಿರುತ್ತದೆ. ಈ ಸ್ಥಬ್ದಚಿತ್ರ ನಿರ್ಮಿಸಲು ರೂ.1,26,600/-ಗಳು ವೆಚ್ಚವಾಗಿದ್ದು, ಇದರಲ್ಲಿ ರೂ.20,000/-ಗಳನ್ನು ಜಿಲ್ಲಾಧಿಕಾರಿಗಳು, ಹಾಸನ ಇವರು ವಿಶ್ವಕನ್ನಡ ಸಮ್ಮೇಳನ ತೇರು ನಿರ್ಮಾಣಕ್ಕೆ ನೀಡಿದ ಮೊತ್ತದಲ್ಲಿ ಭರಿಸಲಾಗಿರುವುದರಿಂದ, ಉಳಿದ ರೂ.1,06,600/-ಗಳನ್ನು ಬಿಡುಗಡೆ ಮಾಡುವಂತೆ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತ ಇಲಾಖೆ, ಹಾಸನ ಇವರು ಕೋರಿದ ಮೇರೆಗೆ ರೂ.1,06,600/-ಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ವಿಷಯವನ್ನು ಸಭೆಯ ಅನುಮೋದನೆಗೆ ಮಂಡಿಸಿದೆ. | ವಿಶೇಷತೆಗಳನ್ನು ಬಿಂಬಿಸುವಂತಹ ಸ್ಥಬ್ಧಚಿತ್ರವನ್ನು ನಿರ್ಮಿಸಲು ವೆಚ್ಚವಾಗಿರುವ ರೂ.1,26,600/-ಗಳಲ್ಲಿ ಜಿಲ್ಲಾ ಪಂಚಾಯಿತಿಯಿಂದ ಬಿಡುಗಡೆ ಮಾಡಿರುವ ರೂ.1,06,600/-ಗಳಿಗೆ ಸಭೆಯು ಸರ್ವಾನುಮತ ದಿಂದ ಘಟನೋತ್ತರ ಮಂಜೂರಾತಿ ನೀಡಿತು. |
| 4 | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| 1 | ಆಗಸ್ಟ್-2011ರ ಮಾಹೆಯಲ್ಲಿ ನಡೆಯುವ ಹಾಸನ ತಾಲ್ಲೂಕು ದಕ್ಷಿಣ ವಲಯ ಮಟ್ಟದ ಕ್ರೀಡಾಕೂಟಕ್ಕೆ ಹೆಚ್ಚಿನ ಸಹಕಾರ ಹಾಗೂ ಧನಸಹಾಯ ನೀಡುವ ಬಗ್ಗೆ | ಮುಖ್ಯೋಪಾಧ್ಯಾಯರು, ಸರ್ಕಾರಿ ಸಂಯುಕ್ತ ಪ್ರೌಢಶಾಲೆ, ದೊಡ್ಡಗೇಣಿಗೆರೆ, ಹಾಸನ ತಾಲ್ಲೂಕು ಇವರು ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಮನವಿಯನ್ನು ಸಲ್ಲಿಸಿ 2011-12ನೇ ಸಾಲಿನಲ್ಲಿ ಆಗಸ್ಟ್ ಮಾಹೆಯಲ್ಲಿ ನಡೆಯುವ ಹಾಸನ ತಾಲ್ಲೂಕು ದಕ್ಷಿಣ ವಲಯ ಮಟ್ಟದ ಕ್ರೀಡಾಕೂಟವನ್ನು ಸರ್ಕಾರಿ ಪ್ರೌಢಶಾಲೆ, ದೊಡ್ಡಗೇಣಿಗೆರೆ ಹಾಗೂ ದೊಡ್ಡಗೇಣಿಗೆರೆ ಗ್ರಾಮ ಮತ್ತು ಗ್ರಾಮ ಪಂಚಾಯಿತಿಯ ಸಹಕಾರದೊಂದಿಗೆ ನಡೆಸಿಕೊಡಬೇಕೆಂದು ಇಲಾಖಾ ಆದೇಶವಾಗಿದ್ದು, ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಈ ಕ್ರೀಡಾಕೂಟದಲ್ಲಿ ದಕ್ಷಿಣ ವಲಯಕ್ಕೆ ಸೇರಿದ 30 ಪ್ರೌಢಶಾಲೆಗಳ ವಿದ್ಯಾರ್ಥಿಗಳು ಹಾಜರಾಗಲಿದ್ದು, ಕಾರ್ಯಕ್ರಮ ರೂಪಿಸಲು, ಕ್ರೀಡಾಪಟುಗಳಿಗೆ ಪ್ರೇರಣೆ ನೀಡಲು ಹೆಚ್ಚಿನ ಧನಸಹಾಯ ನೀಡಬೇಕೆಂದು ಕೋರಿರುತ್ತಾರೆ.<br>ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರು ಅಗತ್ಯ ವಂತಿಕೆ ನೀಡುವಂತೆ ಸೂಚಿಸಿರುವ ಹಿನ್ನಲೆಯಲ್ಲಿ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-ಗಳ ಧನ ಸಹಾಯವನ್ನು ನೀಡಲು ಅವಕಾಶವಿರುತ್ತದೆ ಎಂದು ಯೋಜನಾ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮುಖ್ಯೋಪಾಧ್ಯಾಯರು, ಸರ್ಕಾರಿ ಸಂಯುಕ್ತ ಪ್ರೌಢಶಾಲೆ, ದೊಡ್ಡಗೇಣಿಗೆರೆ, ಹಾಸನ ತಾಲ್ಲೂಕು ಇವರು ಕೋರಿರುವಂತೆ 2011-12ನೇ ಸಾಲಿನ ಆಗಸ್ಟ್ ಮಾಹೆಯಲ್ಲಿ ಸರ್ಕಾರಿ ಪ್ರೌಢಶಾಲೆ, ದೊಡ್ಡಗೇಣಿಗೆರೆ ಹಾಗೂ ದೊಡ್ಡಗೇಣಿಗೆರೆ ಪಂಚಾಯಿತಿಯ ಸಹಕಾರದೊಂದಿಗೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ದಕ್ಷಿಣ ವಲಯ ಮಟ್ಟದ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು |

| | | | |
|---|---|---|---|
| 2 | ರಾಷ್ಟ್ರಕವಿ ಕುವೆಂಪು ಯುವ ಜನಪದ ಕೋಲಾಟ ಸಂಘ, ಚಾಮಡಿಹಳ್ಳಿ ಇವರಿಗೆ ಸಹಾಯಧನ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮನವಿಯನ್ನು ಸಲ್ಲಿಸಿ ಚನ್ನರಾಯಪಟ್ಟಣ ತಾಲ್ಲೂಕು ಚಾಮಡಿಹಳ್ಳಿಯ ರಾಷ್ಟ್ರಕವಿ ಕುವೆಂಪುರ ಯುವ ಜನಪದ ಕೋಲಾಟ ಸಂಘ ಇವರ ವತಿಯಿಂದ ರಾಜ್ಯಮಟ್ಟದ ಕಬಡ್ಡಿ ಪಂದ್ಯಾವಳಿಯನ್ನು ನಡೆಸಲಾಗಿದ್ದು, ಸದರಿ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ಸಹಾಯಧನವನ್ನು ನೀಡುವಂತೆ ಕೋರಿರುತ್ತಾರೆ.<br>ಜಿಲ್ಲಾ ಪಂಚಾಯಿತಿ ವತಿಯಿಂದ ರೂ. ರೂ.10000/-ಗಳ ಸಹಾಯಧನವನ್ನು ನೀಡಲು ಅವಕಾಶವಿರುತ್ತದೆ ಎಂದು ಯೋಜನಾ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. | ಮಾನ್ಯ ಸದಸ್ಯರು ಕೋರಿರುವಂತೆ ಚನ್ನರಾಯಪಟ್ಟಣ ತಾಲ್ಲೂಕು ಚಾಮಡಿಹಳ್ಳಿಯ ರಾಷ್ಟ್ರಕವಿ ಕುವೆಂಪು ಯುವಜನಪದ ಕೋಲಾಟ ಸಂಘ ಇವರ ವತಿಯಿಂದ ನಡೆಸಲಾಗಿದ್ದ ರಾಜ್ಯಮಟ್ಟದ ಕಬಡ್ಡಿ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/- (ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಮದ ನಿರ್ಣಯಿಸಲಾಯಿತು. |
| 3 | ರಾಜ್ಯಮಟ್ಟದ ಥ್ರೋಬಾಲ್ ಪಂದ್ಯಾವಳಿಗೆ ಸಹಾಯಧನ ನೀಡುವ ಬಗ್ಗೆ. | ಅಧ್ಯಕ್ಷರು, ಲಾ ಅಸೋಸಿಯೇಷನ್, ಹಾಸನ ಇವರು ಮನವಿಯನ್ನು ಸಲ್ಲಿಸಿ ಜಿಲ್ಲೆಯಲ್ಲಿ ಕರ್ನಾಟಕದ ವಕೀಲರಿಗಾಗಿ ರಾಜ್ಯಮಟ್ಟದ ಟೆನ್ನಿಸ್ ಬಾಲ್, ಕ್ರಿಕೆಟ್ ಮತ್ತು ಮಹಿಳಾ ವಕೀಲರಿಗಾಗಿ ಥ್ರೋಬಾಲ್ ಪಂದ್ಯಾವಳಿಗಳನ್ನು ಹಾಸನದಲ್ಲಿ ನಡೆಸಲಾಗಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಸಹಾಯಧನವನ್ನು ನೀಡುವಂತೆ ಕೋರಿರುತ್ತಾರೆ. ಮಾನ್ಯ ಅಧ್ಯಕ್ಷರು ಅಗತ್ಯ ವಂತಿಕೆ ನೀಡುವಂತೆ ತಿಳಿಸಿರುತ್ತಾರೆ.<br>ಜಿಲ್ಲಾ ಪಂಚಾಯಿತಿ ವತಿಯಿಂದ ರೂ. ರೂ.10000/-ಗಳ ಸಹಾಯಧನವನ್ನು ನೀಡಲು ಅವಕಾಶವಿರುತ್ತದೆ ಎಂದು ಯೋಜನಾ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. | ಅಧ್ಯಕ್ಷರು, ಲಾ ಅಸೋಸಿಯೇಷನ್, ಹಾಸನ ಇವರು ಕೋರಿರುವಂತೆ ಹಾಸನದಲ್ಲಿ ನಡೆಸಲಾಗಿದ್ದ ರಾಜ್ಯಮಟ್ಟದ ಟೆನ್ನಿಸ್ ಬಾಲ್, ಕ್ರಿಕೆಟ್ ಮತ್ತು ಮಹಿಳಾ ವಕೀಲರಿಗಾಗಿ ಥ್ರೋಬಾಲ್ ಪಂದ್ಯಾವಳಿಗಳಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/- (ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಮದ ನಿರ್ಣಯಿಸಲಾಯಿತು. |
| | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

Chandregowda

(ಬಿ.ಡಿ.ಚಂದ್ರೇಗೌಡ)

ಅಧ್ಯಕ್ಷರು

ಜಿಲ್ಲಾ ಪಂಚಾಯಿತಿ, ಹಾಸನ